# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 266 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ.ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 02.02.2021 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | N.C.D.E.X ಬೆಂಬಲದಿಂದ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಪ್ರತ್ಯೇಕವಾಗಿ ಕೋಶವೊಂದನ್ನು ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ; ಕೋಶದ ಗುರಿ ಮತ್ತು ಉದ್ದೇಶಗಳೇನು; (ವಿವರ ನೀಡುವುದು) | ಇಲ್ಲ. |
| ಆ | ಅನ್ನಭಾಗ್ಯ ಯೋಜನೆ ಕುರಿತು ಅಧ್ಯಯನ ನಡೆಸಲು ಯಾವುದಾದರೂ ಸಂಸ್ಥೆಗೆ ಸರ್ಕಾರದ ವತಿಯಿಂದ ಕೋರಿಕೆಯನ್ನು ನೀಡಲಾಗಿರುವುದೇ; ಹಾಗೀದ್ದಲ್ಲಿ; ಯಾವ ಸಂಸ್ಥೆಗೆ ಅಧ್ಯಯನ ನಡೆಸಲು ಕೋರಲಾಗಿತ್ತು; ಆ ಸಂಸ್ಥೆ ಅಧ್ಯಯನ ನಡೆಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದೇ; | ಇಲ್ಲ. |
| ಇ | ಹಾಗಿದ್ದಲ್ಲಿ; ವರದಿಯಲ್ಲಿ ನೀಡಲಾದಂತೆ ಅನ್ನಭಾಗ್ಯ ಯೋಜನೆ ಕುರಿತು ಅನುಕೂಲ ಮತ್ತು ಅನಾನುಕೂಲಗಳೇನು; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಈ | ಅನ್ನಭಾಗ್ಯ ಯೋಜನೆಯಡಿ ಅಕ್ಕಿ ವಿತರಿಸುವಂತೆ ರಾಗಿ, ಜೋಳ, ಬೇಳೆಕಾಳುಗಳು ಮುಂತಾದ ಆಹಾರ ಸಾಮಾಗ್ರಿಗಳನ್ನು ವಿತರಿಸುವ ಯೋಜನೆ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇಲ ಹಾಗಿದ್ದಲ್ಲಿ; ಈ ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗುವುದು; | ಕೇಂದ್ರ ಸರ್ಕಾರದ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಲಾಗುವ ರಾಗಿ ಮತ್ತು ಬಿಳಿಜೋಳವನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ಪಡಿತರ ಫಲಾನುಭವಿಗಳಿಗೆ ವಿತರಿಸಲಾಗುತ್ತಿದೆ. ಸಾರ್ವಜನಿಕ ವಿತರಣಾ ಪದ್ಧತಿಯಡಿ ಬೇಳೆಕಾಳನ್ನು ವಿತರಿಸುವ ಪ್ರಸ್ತಾವನೆ ಇರುವುದಿಲ್ಲ. |
| ಉ | ಪ್ರಸಕ್ತ ಸಾಲಿನಲ್ಲಿ ಅನ್ನಭಾಗ್ಯಕ್ಕೆ ನೀಡಲಾದ ಅನುದಾನದಲ್ಲಿ ಎಷ್ಟು ಅನುದಾನ ಉಳಿಕೆಯಾಗಿದೆ; ಹಾಗಿದ್ದಲ್ಲಿ; ಬಿಪಿಎಲ್ ಕುಟುಂಬಗಳಿಗೆ ಪಡಿತರ | ಅನ್ನ ಭಾಗ್ಯ ಯೋಜನೆಗೆ ಹಂಚಿಕೆಯಾಗಿರುವ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಲಾಗುತ್ತಿದೆ. ಆದ್ಯತೇತರ (ಎ.ಪಿ.ಎಲ್) ಪಡಿತರ ಚೀಟಿಯನ್ನು ಹೊಂದಿರುವ ಏಕ ಸದಸ್ಯ |

| | | |
|---|---|---|
| | ವಿತರಿಸುವಂತೆ ಎಪಿಎಲ್ ಕುಟುಂಬಗಳಿಗೂ ಸಹ ಪಡಿತರ ವಿತರಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಹಾಗಿದ್ದಲ್ಲಿ ಯಾವಾಗ ವಿತರಿಸಲಾಗುವುದು; | ಪಡಿತರ ಚೀಟಿಗೆ 5 ಕೆ.ಜಿ ಅಕ್ಕಿಯನ್ನು 2 ಮತ್ತು ಅದಕ್ಕಿಂತ ಹೆ ಸದಸ್ಯರಿರುವ ಪಡಿತರ ಚೀಟಿಗೆ 10.ಕೆಜಿ. ಅಕ್ಕಿಯನ್ನು ಪ್ರತಿ ಕಿ.ಲೋ.ಗೆ ರೂ.15/-ರ ಸಬ್ಸಿಡಿ ದರದಲ್ಲಿ ವಿತರಿಸಲಾಗುತ್ತಿದೆ. |
| ಊ | ಎಪಿಎಲ್ ಕುಟುಂಬದವರಿಗೂ ಪಡಿತರ ವಿತರಿಸುವುದರಿಂದ ಸರ್ಕಾರಕ್ಕೆ ಬೇಕಾಗುವ ಅನುದಾನ ಎಷ್ಟು? (ವಿವರ ನೀಡುವುದು) | ಎಪಿಎಲ್ ಪಡಿತರ ಚೀಟಿದಾರರಿಗೆ ಆಹಾರಧಾನ್ಯಗಳನ್ನು ವಿತರಿಸಲು 2020-21ನೇ ಸಾಲಿನಲ್ಲಿ ರೂ.20.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. |

ಆನಾಸ 11 ಆರ್‌ಪಿಆರ್ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.